**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No**.202/2021

**PW**. 9

**CW**. 19

**ಸಾಕ್ಷಿಯ ಹೆಸರು –ಶಿವಪ್ರಕಾಶ ಎಸ್**

**ತಂದೆಯ ಹೆಸರು –ಸಿದ್ಧಯ್ಯ**

**ವಯಸ್ಸು –42 ವರ್ಷಗಳು** ದಿನಾಂಕ **27–05–2025** ರಂದು ಪ್ರಮಾಣವಚನ ಬೋಧಿಸಲಾಯಿತು.

**ಉದ್ಯೋಗ –ಆರಕ್ಷಕ ನಿರೀಕ್ಷಕ , ಕೆ ಆರ್ ನಗರ ಪೊಲೀಸ್ ಠಾಣೆ**

**ವಾಸಸ್ಥಳ – ಕೆ ಆರ್ ನಗರ**

**ಮುಖ್ಯ ವಿಚಾರಣೆಃ– ಸರ್ಕಾರಿ ಅಭಿಯೋಜಕರಿಂದಃ–**

ನಾನು ಸೆಪ್ಟೆಂಬರ್ 2018 ರಿಂದ ಫೆಬ್ರವರಿ 2021 ರವರೆಗೆ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಸೇವೆ ಸಲ್ಲಿಸಿದ್ದೇನೆ.

ದಿಃ 18–04–2020 ರಂದು ಮಧ್ಯಾಹ್ನ 12.00 ಗಂಟೆಗೆ ನಾನು ಠಾಣಾ ಕರ್ತವ್ಯದಲ್ಲಿರುವಾಗ ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು, ನಮ್ಮ ಠಾಣಾ ಮೊ ಸಂ 111/2020 ರಂತೆ ಪ್ರಕರಣ ದಾಖಲು ಮಾಡಿಕೊಂಡು , ಪ್ರ ವ ವ ಯನ್ನು ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಗಳಿಗೆ ಕಳುಹಿಸಿರುತ್ತೇನೆ. ಸದರಿ ದೂರನ್ನು ಈಗಾಗಲೇ ನಿಪಿ–1 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ–1(ಬಿ) ಎಂದು ಗುರುತಿಸಲಾಯಿತು. ಪ್ರ ವ ವ ಯನ್ನು ಈಗ ನೋಡುತ್ತಿದ್ದು , ಅದನ್ನು ನಿಪಿ–19 ಸಾಕ್ಷಿಯ ಸಹಿಯನ್ನು ನಿಪಿ–19(ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ–7 ಮತ್ತು 8 ರವರ ಸಮಕ್ಷಮ ಕೃತ್ಯ ನಡೆದ ಸ್ಥಳಕ್ಕೆ ಹೋಗಿ ಚಾಸಾ–1 ಸ್ಥಳ ತೋರಿಸಿದ ಮೇರೆಗೆ ಮಧ್ಯಾಹ್ನ 1.15 ರಿಂದ

2.15 ರವರೆಗೆ ಕೃತ್ಯ ನಡೆದ ಸ್ಥಳದ ಪಂಚನಾಮೆ ಮಾಡಿ , ಸ್ಥಳದಲ್ಲಿ ರಕ್ತಸಿಕ್ತ ಮಣ್ಣು, ಸಾದಾ ಮಣ್ಣು , ಚಾಸಾ-1 ಹಾಜರು ಮಾಡಿದ ರಕ್ತಸಿಕ್ತ ಟವೆಲ್ ಗಳನ್ನು ಜಪ್ತಿ ಮಾಡಿರುತ್ತೇನೆ. ಸದರಿ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಪಂಚನಾಮೆ ಕಾಲಕ್ಕೆ ಜಪ್ತಿ ಮಾಡಿದ ರಕ್ತಸಿಕ್ತ ಮಣ್ಣು, ಸಾದಾ ಮಣ್ಣು , ಚಾಸಾ-1 ಹಾಜರು ಮಾಡಿದ ರಕ್ತಸಿಕ್ತ ಟವೆಲ್ ಗಳನ್ನು ಈಗಾಗಲೇ ಮು.ಮಾ-2 ರಿಂದ 4 ಎಂದು ಗುರುತಿಸಲಾಗಿದೆ. ಪಂಚನಾಮೆ ಕಾಲಕ್ಕೆ ತೆಗೆದ ಫೋಟೋಗಳನ್ನು ಈಗಾಗಲೇ ನಿಪಿ-3 ರಿಂದ 9 ಎಂದು ಗುರುತಿಸಲಾಗಿದೆ.

ದಿಃ 19-04-2020 ರಂದು ಚಾಸಾ-3 ರಿಂದ 7 ರವರ ಹೇಳಿಕೆಗಳನ್ನು ಪಡೆದಿದ್ದೇನೆ. ಅದೇ ದಿನ ಸಂಜೆ 5.00 ಗಂಟೆಗೆ ಸಣ್ಣೇಗೌಡರ ಕಾಲೋನಿಯ 1 ನೇ ಆರೋಪಿಯ ಮನೆಯ ಮುಂದೆ 1 ನೇ ಆರೋಪಿಯನ್ನು ವಶಕ್ಕೆ ಪಡೆದು, ಠಾಣೆಗೆ ಕರೆದುಕೊಂಡು ಬಂದು, ಆತನನ್ನು ದಸ್ತಗಿರಿ ಮಾಡಿ , ಆತನ ಸ್ವಇಚ್ಛಾ ಹೇಳಿಕೆ ಪಡೆದಿರುತ್ತೇನೆ. ಆತನ ಸ್ವಇಚ್ಛಾ ಹೇಳಿಕೆಯಲ್ಲಿ ನೀಡಿದ ಮಾಹಿತಿ ಮೇರೆಗೆದಿಃ 20-04-2020 ರಂದು ಬೆಳಗ್ಗೆ 10.00 ಗಂಟೆಗೆ 1 ನೇ ಆರೋಪಿಯು ಆತನ ಮನೆಯ ಬಳಿ ಕರೆದುಕೊಂಡು ಹೋಗಿ , ಕೃತ್ಯಕ್ಕೆ ಬಳಸಿದ ಮಚ್ಚನ್ನು ಹಾಜರು ಮಾಡಿದ್ದು , ಚಾಸಾ-9 ಮತ್ತು 10 ರವರ ಸಮಕ್ಷಮ ಬೆಳಗ್ಗೆ 10.00 ರಿಂದ 11.00 ಗಂಟೆವರೆಗೆ ಪಂಚನಾಮೆ ಮಾಡಿ, ಸದರಿ ಮಚ್ಚನ್ನು ಜಪ್ತಿ ಮಾಡಿದ್ದೇನೆ. ಮಚ್ಚನ್ನು ಈಗಾಗಲೇ ಮು.ಮಾ-1 ಎಂದು ಗುರುತಿಸಲಾಗಿದೆ. ಸದರಿ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ-10 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-10(ಸಿ) ಎಂದು ಗುರುತಿಸಲಾಯಿತು. ಆರೋಪಿಯ ಸ್ವಇಚ್ಛಾ ಹೇಳಿಕೆಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-20 ಎಂದು, ಸಾಕ್ಷಿಯ ಸಹಿಯನ್ನು ನಿಪಿ-

20(ಎ) ಎಂದು ಆರೋಪಿಯ ಸಹಿಯನ್ನು ನಿಪಿ-20(ಬಿ) ಎಂದು ಗುರುತಿಸಲಾಯಿತು. ನಂತರ 1 ನೇ ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರು ಮಾಡಿದ್ದೇನೆ.

ದಿಃ 08-05-2020 ರಂದು 2 ರಿಂದ 5 ನೇ ಆರೋಪಿತರು ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದು ಠಾಣೆಗೆ ಹಾಜರಾಗಿದ್ದು, ಅವರನ್ನು ವಿಚಾರಿಸಿ, ಬಿಡುಗಡೆ ಮಾಡಿದ್ದೇನೆ.

ದಿಃ 10-05-2020 ರಂದು ಚಾಸಾ-2 ರವರ ಹೇಳಿಕೆ ಪಡೆದಿರುತ್ತೇನೆ. ದಿಃ 15-05-2020 ರಂದು ಚಾಸಾ-15 ರವರ ಮೂಲಕ ವಶಪಡಿಸಿಕೊಂಡ ಮುದ್ದೆಮಾಲುಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಕಳುಹಿಸಿರುತ್ತೇನೆ.

ದಿಃ 28-05-2020 ರಂದು 1 ನೇ ಆರೋಪಿಯ ಮನೆಯ ಅಸೆಸ್ ಮೆಂಟ್ ಕಾಪಿಯನ್ನು ಪಡೆದು ಕಡತಕ್ಕೆ ಸೇರಿಸಿಕೊಂಡಿದ್ದೇನೆ. ಅದನ್ನು ಈಗಾಗಲೇ ನಿಪಿ-17 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು ಗುರುತಿಸಲಾಯಿತು.

ದಿಃ 16-07-2020 ರಂದು ಗಾಯಾಳುವಿನ ಗಾಯದ ಪ್ರಮಾಣ ಪತ್ರವನ್ನು ಪಡೆದು ಕಡತಕ್ಕೆ ಸೇರಿಸಿಕೊಂಡಿದ್ದೇನೆ. ಅದನ್ನು ಈಗಾಗಲೇ ನಿಪಿ-13 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-13(ಬಿ) ಎಂದು ಗುರುತಿಸಲಾಯಿತು.

ದಿಃ 16-07-2020 ರಂದು ರಾಸಾಯನಿಕ ವಿಶ್ಲೇಷಣಾ ವರದಿಯನ್ನು ಪಡೆದು ಕಡತಕ್ಕೆ ಸೇರಿಸಿಕೊಂಡಿದ್ದೇನೆ. ಅದನ್ನು ಈಗಾಗಲೇ ನಿಪಿ-15 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು.

ದಿಃ 18-01-2021 ರಂದು ಮು.ಮಾ-1 ಮತ್ತು ಗಾಯದ ಪ್ರಮಾಣ ಪತ್ರವನ್ನು ವೈದ್ಯರ ಮುಂದೆ ಹಾಜರು ಮಾಡಿ , ಅಂತಿಮ ಅಭಿಪ್ರಾಯ ವರದಿ ಪಡೆದಿದ್ದೇನೆ. ಅದನ್ನು ಈಗಾಗಲೇ ನಿಪಿ-14 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-14(ಬಿ) ಎಂದು ಗುರುತಿಸಲಾಯಿತು.

ದಿಃ 17-02-2021 ರಂದು ಕೃತ್ಯ ನಡೆದ ಸ್ಥಳದ ನಕಾಶೆಯನ್ನು ಪಿಡಬ್ಲ್ಯೂಡಿ ಇಲಾಖೆಯವರಿಂದ ಪಡೆದು ಕಡತಕ್ಕೆ ಸೇರಿಸಿಕೊಂಡಿದ್ದೇನೆ. ಅದನ್ನು ಈಗಾಗಲೇ ನಿಪಿ-16 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-16(ಎ) ಎಂದು ಗುರುತಿಸಲಾಯಿತು.

ಕೃತ್ಯ ನಡೆದ ಸ್ಥಳದಲ್ಲಿ ಮಹಜರ್ ಸಮಯಕ್ಕೆ ಮತ್ತು ಮುದ್ದೆಮಾಲು 1 ಅನ್ನು ಅಮಾನತ್ತುಪಡಿಸಿಕೊಳ್ಳುವ ಸುವಯದಲ್ಲಿ ನಮ್ಮ ಸಿಬ್ಬಂದಿ ಚಾಸಾ-11 ಫೋಟೋ ತೆಗೆದಿದ್ದು, ಅವರಿಂದ ಸಾಕ್ಷ್ಯ ಅಧಿನಿಯಮ ಕಲಂ 65 ಬಿ ಅಡಿಯಲ್ಲಿ ಪ್ರಮಾಣ ಪತ್ರ ಪಡೆದಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು, ನಿಪಿ-21 ಎಂದು ಸಾಕ್ಷಿಯ ಸಹಿಯನ್ನು ನಿಪಿ-21(ಎ) ಎಂದು ಗುರುತಿಸಲಾಯಿತು. ನಂತರ ತನಿಖೆ ಪೂರ್ಣಗೊಳಿಸಿ ಸಾಕಷ್ಟು ಸಾಕ್ಷಾದಾರಗಳು ಇದ್ದ ಕಾರಣ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿದ್ದೇನೆ.

**ಪಾಟೀಸವಾಲುಃ- ಆರೋಪಿತರ ಪರ ಶ್ರೀ ಆರ್ ಎಸ್ ಎಂ ವಕೀಲರಿಂದಃ-**

ಚಾಸಾ-**1** ರವರು ಠಾಣೆಗೆ ಹಾಜರಾಗಿ ದೂರು ನೀಡಿಲ್ಲ ಎಂದರೆ ಸರಿಯಲ್ಲ. ಪಂಚರ ಸಮಕ್ಷಮ ಕೃತ್ಯ ನಡೆದ ಸ್ಥಳದಲ್ಲಿ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಗಳನ್ನು ಮತ್ತು ಮುದ್ದೆಮಾಲುಗಳನ್ನು ಠಾಣೆಯಲ್ಲಿ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಅವರ ಹೇಳಿಕೆಗಳಂತೆ ಪಡೆದಿಲ್ಲ ಎಂದರೆ ಸರಿಯಲ್ಲ. **1** ನೇ ಆರೋಪಿಯ ಸ್ವಇಚ್ಛಾ ಹೇಳಿಕೆಯನ್ನು ಒತ್ತಾಯದಿಂದ ಪಡೆದಿದ್ದೇನೆ ಎಂದರೆ ಸರಿಯಲ್ಲ. ಮು.ಮಾ**1** ರ ಮಚ್ಚನ್ನು

ಆರೋಪಿ ಮನೆಯಿಂದ ಹಾಜರು ಮಾಡಿಲ್ಲ ಎಂದರೆ ಸರಿಯಲ್ಲ. ಗಾಯದ ಪ್ರಮಾಣ ಪತ್ರ , ಅಂತಿಮ ಅಭಿಪ್ರಾಯ ವರದಿ, ಅಸೆಸ್ ಮೆಂಟ್ ಪತ್ರ, ಕೃತ್ಯ ನಡೆದ ಸ್ಥಳದ ನಕಾಶೆ ಮತ್ತು ಇತರೆ ದಾಖಲೆಗಳನ್ನು ನಮ್ಮ ಅನೂಕೂಲಕ್ಕೆ ತಕ್ಕಂತೆ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಫೋಟೋಗಳನ್ನು ನಮ್ಮ ಅನೂಕೂಲಕ್ಕೆ ತಕ್ಕಂತೆ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ಯಾವುದೇ ಸಾಕ್ಷ್ಯಾದಾರಗಳು ಇಲ್ಲದಿದ್ದರೂ ಕೂಡ ದೋಷಾರೋಪಣ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.